



ಅರುಣ ಪಿ. ಭಟ್ಟ

## ವಾರಭವಿಷ್ಯ 3.9.2020ರಿಂದ 9.9.2020ರವರೆಗೆ


**ಮೇಷ**

ಹೊಸ ಕೆಲಸಗಳಿಗೆ ಯತ್ನಿಸಲು ಸೂಕ್ತ ಕಾಲ. ಉದ್ಯೋಗರದಲ್ಲಿ ಅದ್ಭುತ ಯಶಸ್ಸು. ಕಲೆ, ಬರವಣಿಗೆ, ವೈದ್ಯಕೀಯ, ನಿರ್ಮಾಣ, ಭದ್ರತೆ ಮತ್ತು ತಂತ್ರಜ್ಞಾನದಂತಹ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುವವರಿಗೆ ಗ್ರಹಗತಿಗಳು ಅನುಕೂಲಕರವಾಗಿವೆ. ಹೊಸದಾಗಿ ಕೆಲಸಕ್ಕಾಗಿ ಇಂಟರ್ ವ್ಯೂಗಳಿಗೆ ತೆರಳಿದರೆ ಸಕಾರಾತ್ಮಕ ಫಲಿತಾಂಶ ದೊರೆಯುವ ಸಾಧ್ಯತೆಯಿದೆ. ಶುಭದಿನ **8.** ಗೋಪೂಜೆ ಮಾಡಿರಿ ಉಮಾಮಹೇಶ್ವರ ಪ್ರಾರ್ಥನೆ ಮಾಡಿರಿ.


**ವೃಷಭ**

ಆದಾಯ ಹೆಚ್ಚಳಕ್ಕೆ ಅವಕಾಶ ಇದೆ. ಕುಟುಂಬದ ಸಂತೋಷದಿಂದ ಮನಸು ಕೂಡ ಸಮಾಧಾನವಾಗಿರುತ್ತದೆ. ನಿಮ್ಮ ಜೀವನಮಟ್ಟ ಹೆಚ್ಚುತ್ತದೆ. ಉದ್ಯೋಗ ವಿಚಾರದಲ್ಲಿ ಯಶಸ್ಸು ನಿಮ್ಮ ಮನೆಯ ಬಾಗಿಲು ಬರುತ್ತದೆ. ಹೊಸದಾಗಿ ಉದ್ಯೋಗಕ್ಕೆ ಪ್ರಯತ್ನಿಸುತ್ತಿರುವವರು, ಕೆಲಸ ಬದಲಾಯಿಸಲು ಯತ್ನಿಸುತ್ತಿರುವವರು ಹೆಚ್ಚು ಶ್ರಮ ಹಾಕಬೇಕಾಗುತ್ತದೆ. ಶುಭದಿನ **6.** ಹನುಮಾನ್ ಚಾಲಿಸ್ ಪಠಿಸಿರಿ.


**ಮಿಥುನ**

ಶುಭ ಕಾರ್ಯವನ್ನು ಆಯೋಜಿಸುವ ಸಾಧ್ಯತೆ ಇದೆ. ಈ ವಾರದ ಮೊದಲಾರ್ಧದಲ್ಲಿ ಗ್ರಹಗತಿಗಳು ನಿಮಗೆ ಅನುಕೂಲಕರವಾಗಿವೆ. ಯಾವುದೇ ಕೆಲಸಗಳಲ್ಲಿ ಯಶಸ್ಸು ಕಾಣಬಹುದು. ಉದ್ಯೋಗ ಸ್ಥಳದಲ್ಲಿ ನಿಮ್ಮ ಗೌರವ ಹೆಚ್ಚುತ್ತದೆ. ಸಹೋದ್ಯೋಗಿಗಳ ಜತೆಗೆ ನಿಮ್ಮ ಬಾಂಧವ್ಯ ಗಟ್ಟಿ ಆಗಲಿದೆ. ಪೋಷಕರ ಸಂತೋಷಕ್ಕೆ ನೀವು ಕಾರಣರಾಗುತ್ತೀರಿ. ಶುಭದಿನ **9.** ಲಕ್ಷ್ಮೀನಾರಾಯಣ ಹೃದಯ ಪಾರಾಯಣ ಮಾಡಿರಿ.


**ಕಟಕ**

ಈ ವಾರ ಸಕಾರಾತ್ಮಕ ಪ್ರಭಾವ ನಿಮ್ಮ ಮೇಲೆ ಬೀರಲಿದೆ. ಕಾನೂನು ವ್ಯಾಜ್ಯಗಳು, ವಾದಕುಟುಂಬದಲ್ಲಿ ಸಮತೋಲನ ಕಾಯ್ದುಕೊಳ್ಳಲು ಪ್ರಯತ್ನ ಮಾಡುತ್ತೀರಿ. ಹೂಡಿಕೆ, ಸಂಪತ್ತು ವಿಸ್ತರಣೆ ಹಾಗೂ ವಿದೇಶಿ ವ್ಯವಹಾರದಲ್ಲಿ ನೀವಂದುಕೊಂಡಂತಹ ಫಲಿತಾಂಶ ದೊರೆಯಲಿದೆ. ಆರ್ಥಿಕ ಸ್ಥಿತಿ ಸಾಧಾರಣ ಎಂಬುದಕ್ಕಿಂತ ಸ್ವಲ್ಪ ಉತ್ತಮವಾಗಿರುತ್ತದೆ. ಶುಭದಿನ **4.** ವೆಂಕಟೇಶ್ವರ ಸ್ತೋತ್ರ ಪಠಿಸಿರಿ.


**ಸಿಂಹ**

ಆರೋಗ್ಯವೂ ಸೇರಿದಂತೆ ಹಲವು ಸಮಸ್ಯೆಗಳು ಬಗೆಹರಿಯಲು ಸಾಧ್ಯವಾಗುತ್ತದೆ. ಇದರಿಂದ ನಿಮ್ಮ ಸಾಮರ್ಥ್ಯ ಹೆಚ್ಚಾಗಿರುತ್ತದೆ. ಮನೆಯಲ್ಲಿ ಶುಭ ಕಾರ್ಯ ಆಯೋಜಿಸುವ ಸಾಧ್ಯತೆ ಇದೆ. ನಿಮಗೆ ವಹಿಸಿದ ಜವಾಬ್ದಾರಿಗಳನ್ನು ಸಹ ತುಂಬ ಸಲೀಸಾಗಿ, ಅಚ್ಚುಕಟ್ಟಾಗಿ ಪೂರ್ಣಗೊಳಿಸುತ್ತೀರಿ. ಪ್ರೀತಿಪಾತ್ರರ ಜತೆಗೆ ತುಂಬ ಸಂತೋಷವಾದ ಸಮಯವನ್ನು ಕಳೆಯಲಿದ್ದೀರಿ. ಶುಭದಿನ **5.** ವಿಷ್ಣು ಸಹಸ್ರನಾಮ ಓದಿರಿ.


**ಕನ್ಯಾ**

ವಾರದ ಶುರುವಿನಲ್ಲೇ ಉದ್ಯೋಗ ವಿಚಾರವಾಗಿ ಪ್ರಯಾಣ ಮಾಡಬೇಕಾಗಿ ಬರಬಹುದು. ಹೊಸ ಕೆಲಸ ಅಥವಾ ವರ್ಗಾವಣೆಯ ಸಾಧ್ಯತೆ ಇದೆ. ವ್ಯಾಪಾರ ವಿಸ್ತರಣೆಗೆ ಆಲೋಚನೆ ಮಾಡುತ್ತೀರಿ. ಆದರೆ ಅದರ ಸಲುವಾಗಿಯೂ ಪ್ರಯಾಣ ಮಾಡುವ ಅಗತ್ಯ ಕಂಡುಬರುತ್ತದೆ. ಕಾನೂನು ಕಟ್ಟಲೆಗಳು ನಡೆಯುತ್ತಿದ್ದಲ್ಲಿ ನಿಮ್ಮ ಪರವಾಗಿ ವಾದ ಬಲಗೊಳ್ಳಲಿದೆ. ಶುಭದಿನ **9.** ನವದುರ್ಗಾ ಆರಾಧನೆ ಮಾಡಿರಿ.


**ತುಲಾ**

ಈ ವಾರ ಹಲವು ಕ್ಷೇತ್ರದಲ್ಲಿ ಸಕಾರಾತ್ಮಕವಾದ ಫಲಿತಾಂಶ ಪಡೆಯಲು ಸೂಕ್ತವಾಗಿದೆ. ರಚನಾತ್ಮಕ ಕಲೆ, ಸಂಶೋಧನೆ, ತಂತ್ರಜ್ಞಾನ ಕ್ಷೇತ್ರದಲ್ಲಿ ಆಸಕ್ತಿ ಇದ್ದರೆ ಅದೃಷ್ಟ ನಿಮ್ಮ ಪಾಲಿಗೆ ಬರಲಿದೆ. ವಾಣಿಜ್ಯ, ಸ್ಪರ್ಧಾತ್ಮಕ ಕ್ಷೇತ್ರದಲ್ಲೂ ಯಶಸ್ಸು ದೊರೆಯಲಿದೆ. ನಿಮ್ಮ ಶ್ರಮಕ್ಕೆ ಉತ್ತಮ ಫಲಿತಾಂಶ ಸಿಗಲಿದೆ. ವೈಯಕ್ತಿಕ ಸಂಬಂಧದಲ್ಲಿ ಸಂತೋಷ ಕಾಣಿಸಿಕೊಳ್ಳುತ್ತದೆ. ಶುಭದಿನ **7.** ಆದಿತ್ಯ ಹೃದಯ ಪಠಿಸಿರಿ.


**ವೃಶ್ಚಿಕ**

ವಾರದ ಮೊದಲ ಭಾಗದಲ್ಲಿ ಅತಿ ಮುಖ್ಯವಾದ ಕೆಲಸ ಮುಗಿಸಿಕೊಳ್ಳಿ. ಉದ್ಯೋಗಸ್ಥರು ಆಲೋಚನೆಗಳಿಂದ ಮೆಚ್ಚುಗೆಗೆ ಪಾತ್ರರಾಗುತ್ತೀರಿ. ನಿಮ್ಮ ಸಾಮರ್ಥ್ಯ ಕಂಡು ಇತರರು ಬೆರಗಾಗುತ್ತಾರೆ. ಬಹುಮಾನ ಅಥವಾ ಸಾರ್ವಜನಿಕ ಮನ್ನಣೆ ದೊರೆಯುವ ಅವಕಾಶಗಳು ನಿಚ್ಚಳವಾಗಿವೆ. ಹೊಸ ಕೆಲಸಕ್ಕೆ ಪ್ರಯತ್ನ ಮಾಡುತ್ತಿರುವವರು ಶ್ರಮವನ್ನು ಹೆಚ್ಚಿಸಬೇಕು. ಶುಭದಿನ **8.** ಲಕ್ಷ್ಮೀ ನರಸಿಂಹ ಸ್ತೋತ್ರ ಪಠಿಸಿರಿ.


**ಧನಸ್ಸು**

ಗ್ರಹಗತಿಗಳು ನಿಮ್ಮ ಕಡೆಗೆ ಶುಭ ದೃಷ್ಟಿ ಬೀರುತ್ತಿವೆ. ಬಾಕಿ ಇರುವ ನಿಮ್ಮ ಹಲವು ಕೆಲಸಗಳಿಗೆ ಈ ವಾರ ಪರಿಹಾರ ಸಿಗಲಿದೆ. ಉದ್ಯೋಗ ಹಾಗೂ ವೈಯಕ್ತಿಕ ಸಂಗತಿಗಳಲ್ಲಿ ನಿಮ್ಮ ಪಾಲಿಗೆ ಯಶಸ್ಸು ದೊರೆಯಲಿದೆ. ತುಂಬ ಮುಖ್ಯವಾದ ಚರ್ಚೆ ಕೂಡ ನಡೆಸುವ ಸಾಧ್ಯತೆ ಇದೆ. ಈ ಅವಧಿಯಲ್ಲಿ ಹೆಚ್ಚು ಸಮಾಧಾನ ಹಾಗೂ ಸಂತೋಷದಿಂದ ಕಾಣಿಸಿಕೊಳ್ಳುತ್ತೀರಿ. ಶುಭದಿನ. **9.** ಸುಬ್ರಹ್ಮಣ್ಯ ಸ್ವಾಮಿಗೆ ಕ್ಷೀರಾಭಿಷೇಕ ಮಾಡಿರಿ.


**ಮಕರ**

ವಾರದ ಶುರುವಿನಲ್ಲಿ ದೂರದ ಪ್ರಯಾಣ ಮಾಡುವ ಸಾಧ್ಯತೆ ಇದೆ. ಹಣಕಾಸು ಹೂಡಿಕೆ, ಕಾನೂನು ವ್ಯವಹಾರಗಳು ಈ ಅವಧಿಯಲ್ಲಿ ನಿಮಗೆ ಅನುಕೂಲಕರವಾಗಿ ಇವೆ. ಈ ವೇಳೆ ನಿಮ್ಮ ಆರೋಗ್ಯದಲ್ಲಿ ಕೆಲ ಸಮಸ್ಯೆಗಳು ಕಾಣಿಸಿಕೊಳ್ಳುವ ಸಾಧ್ಯತೆಗಳಿವೆ. ಹಲವು ಬಗೆಯಲ್ಲಿ ದೈಹಿಕ ಬಾಧೆ ನೋವುಗಳನ್ನು ಅನುಭವಿಸುತ್ತೀರಿ. ಆಹಾರದ ಬಗ್ಗೆ ಹೆಚ್ಚು ಗಮನ ವಹಿಸಿ. ಶುಭದಿನ **6.** ಕಾಲಭೈರವನ ಸೇವೆ ಮಾಡಿರಿ.


**ಕುಂಭ**

ವಾರದ ಶುರುವಿನಿಂದಲೇ ನಿಮ್ಮ ಆರೋಗ್ಯ ಉತ್ತಮವಾಗಿರುತ್ತದೆ. ಇದ್ದ ಬಿಕ್ಕಟ್ಟುಗಳು ನಿವಾರಣೆ ಆಗುತ್ತವೆ. ನಿಮ್ಮಲ್ಲಿ ಸಕಾರಾತ್ಮಕವಾದ ಪ್ರಗತಿ ಕಾಣಿಸಿಕೊಳ್ಳುತ್ತದೆ. ದೈಹಿಕ ಸದೃಢತೆ ಬಗ್ಗೆ ಹೆಚ್ಚಿನ ಗಮನ ನೀಡುವ ಸಾಧ್ಯತೆ ಇದೆ. ಯೋಗ ತರಗತಿಗಳಿಗೆ ಸೇರಲು ಆಲೋಚನೆ ಮಾಡುತ್ತೀರಿ. ಇದರಿಂದ ನಿಮ್ಮ ಶಕ್ತಿ– ಚೈತನ್ಯ ಹೆಚ್ಚಾಗುತ್ತದೆ. ಶುಭದಿನ **8.** ಶನಿಸ್ತೋತ್ರ ಪಠಿಸಿರಿ.


**ಮೀನ**

ಶುಭ ಸುದ್ದಿಯನ್ನು ಕೇಳುತ್ತೀರಿ. ನಿಮ್ಮ ಚೈತನ್ಯ ವೃದ್ಧಿಯಾಗುತ್ತದೆ. ಇದರ ಜತೆಗೆ ಧೈರ್ಯ, ಮಾನಸಿಕ ದೃಢತೆ ಹೆಚ್ಚಲಿದೆ. ನಿಮ್ಮ ವಿರೋಧಿಗಳನ್ನು ಈ ಅವಧಿಯಲ್ಲಿ ಮಣಿಸುತ್ತೀರಿ. ಹಣಕಾಸು ಹೂಡಿಕೆ ಲಾಭದಾಯಕವಾಗಿ ಇರುತ್ತದೆ. ನಿಮ್ಮ ಆರೋಗ್ಯದ ಬಗ್ಗೆ ಹೆಚ್ಚಿನ ಗಮನ ನೀಡಬೇಕಾಗುತ್ತದೆ. ಉದ್ಯೋಗದಲ್ಲಿ ಯಶಸ್ಸು ನಿಮ್ಮ ಪಾಲಿಗೆ ದೊರೆಯಲಿದೆ. ಶುಭದಿನ **5.** ಗಣಪತಿಗೆ ದೂರ್ವಾರ್ಚನೆ ಮಾಡಿರಿ.